ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ: 22ನೇ ಜುಲೈ, 2019

ಪಶು ಚಿಕಿತ್ಸಾಲಯಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

81 (120ಎ) ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿರುವ ಒಟ್ಟು ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಇಲ್ಲಿ ಸೂಕ್ತ ಪ್ರದೇಶಗಳಲ್ಲಿನ ದನ-ಕರುಗಳಿಗೆ ಚಿಕಿತ್ಸೆಯನ್ನು ನೀಡಲಾಗುತ್ತಿದೆಯೇ;

(ಆ) ಜಾನುವಾರುಗಳ ಸಂಖ್ಯೆಗೆ ಅನುಗುಣವಾಗಿ ಗ್ರಾಮೀಣ ಪ್ರದೇಶದಲ್ಲಿ ಆಸ್ಪತ್ರೆಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಕಡಿಮೆ ದನ-ಕರುಗಳಿರುವ ಪ್ರದೇಶದಲ್ಲಿನ ಆಸ್ಪತ್ರೆಯನ್ನು ಹೆಚ್ಚಿನ ದನ-ಕರುಗಳಿರುವ ಪ್ರದೇಶಕ್ಕೆ ಸ್ಥಳಾಂತರ ಮಾಡುವ ಆಲೋಚನೆ ಸರ್ಕಾರಕ್ಕೆ ಇದೆಯೇ ; ಅಂತಹ ಆಲೋಚನೆ ಇದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪ್ರದೇಶವಾರು ವಿವರಣೆಯನ್ನು ನೀಡುವುದು)

(ಈ) ಸಂಪೂರ್ಣವಾಗಿ ಪಶುಸಂಗೋಪನೆ ಮತ್ತು ಹೈನುಗಾರಿಕೆ ಮೇಲೆ ಅವಲಂಬಿತವಾಗಿರುವ ಕರ್ನಾಟಕ ಮತ್ತು ತಮಿಳುನಾಡು ಗಡಿ ಪ್ರದೇಶದಲ್ಲಿನ ಆನೇಕಲ್ ತಾಲ್ಲೂಕಿನ ಕಟ್ಟಕಡೆಯ ಹಳ್ಳಿಯಾದ ವನಕನಹಳ್ಳಿಯಲ್ಲಿನ ರೈತರು ಈ ಪ್ರದೇಶದಲ್ಲಿ ಪಶು ವೈದ್ಯಕೀಯ ಚಿಕಿತ್ಸಾಲಯವನ್ನು ನಿರ್ಮಿಸಲು ಈ ಹಿಂದೆ ಮನವಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರವು ಯಾವುದೇ ಕ್ರಮವನ್ನು ಕೈಗೊಳ್ಳದಿರುವುದಕ್ಕೆ ಕಾರಣವೇನು? (ಸಂಪೂರ್ಣ ವಿವರ ನೀಡುವುದು)